1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ನಂಜನಗೂಡು

ಸಿ.ಸಿ.ಸಂಖ್ಯೆ1558/2025

ಪಿರ್ಯಾದಿ : ಕವಲಂದೆ ಪೊಲೀಸರು

ವಿರುದ್ಧ

ಆರೋಪಿ :
1 ಮಹದೇವಪ್ರಸಾದ್ ಬಿನ್ ಮಾದಪ್ಪ 23 ವರ್ಷ
2 ದಿಲೀಪಕುಮಾರ್ ಆರ್ ಬಿನ್ ರುದ್ರಪ್ಪ 24 ವರ್ಷ
3 ರುದ್ರಪ್ಪ ಬಿನ್ ಲೇಟ್ ರಾಮಪ್ಪ 50 ವರ್ಷ
4 ಮಾದಪ್ಪ ಬಿನ್ ಲೇಟ್ ರಾಮಪ್ಪ 58 ವರ್ಷ
5 ಶಿವಣ್ಣ ಬಿನ್ ಲೇಟ್ ನಾಗಪ್ಪ 36 ವರ್ಷ
6 ಮಾದಪ್ಪ ಬಿನ್ ಲೇಟ್ ಪುಟ್ಟಬಸಪ್ಪ 53 ವರ್ಷ
7 ಚಂದ್ರಪ್ಪ ಬಿನ್ ಲೇಟ್ ನಂಜುಂಡಪ್ಪ 55 ವರ್ಷ
8 ಮಾದಪ್ಪ ಬಿನ್ ಲೇಟ್ ಶಿವಮಲ್ಲಪ್ಪ 53 ವರ್ಷ

ಎಲ್ಲರ ವಾಸಃ ಕಾರೆಪುರ ಗ್ರಾಮ, ನಂಜನಗೂಡು ತಾಲ್ಲೂಕು

## ದೋಷಾರೋಪಣೆ

ಶ್ರೀಮತಿ.ಸರಿತ ಕುಮಾರಿ.ಎ.ಎಂ, ಬಿ.ಎ.,ಎಲ್.ಎಲ್.ಬಿ., *1* ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನಂಜನಗೂಡು ಆದ ನಾನು ಆರೋಪಿತರಾದ ನಿಮ್ಮ ಮೇಲೆ ದೋಷಾರೋಪಿಸುವುದೇನೆಂದರೆ**:-**

ದಿನಾಂಕ 07-01-2025 ಬೆಳಿಗ್ಗೆ 8.30 ಗಂಟೆ ಸಮಯದಲ್ಲಿ ಕವಲಂದೆ ಪೊಲೀಸ್ ಠಾಣಾ ಸರಹದ್ದು ಕಾರೆಪುರ ಗ್ರಾಮದ ಚಾಸಾ.1 ರವರು ತಮ್ಮ ಮನೆಯಿಂದ ಶಿವಣ್ಣ ರವರ ಅಂಗಡಿ ಮುಂದಿನ ಸಾರ್ವಜನಿಕ ರಸ್ತೆಯಲ್ಲಿ ನಡೆದುಕೊಂಡು ಹೋಗುತ್ತಿರುವಾಗ ಹಳೆಯ ದ್ವೇಷದಿಂದ 1 ನೇ ಆರೋಪಿತರಾದ ನೀವು ಚಾಸಾ.1 ರವರನ್ನು ಅಡ್ಡಗಟ್ಟಿ ಮುಂದೆ ಹೋಗದಂತೆ ತಡೆದು ಅಕ್ರಮ ತಡೆಯನ್ನುಂಟು ಮಾಡಿರುತ್ತೀರಿ. ಆದ್ದರಿಂದ ಆರೋಪಿತರಾದ ನೀವು ಭಾರತೀಯ ನ್ಯಾಯ

ಸಂಹಿತೆಯ ಕಲಂ.126(2) ಸಹವಾಚಕ ಕಲಂ.190 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಎರಡನೆಯದಾಗಿ , ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಸಮಾನ ಉದ್ದೇಶವನ್ನು ಹೊಂದಿ, 1 ನೇ ಆರೋಪಿತರಾದ ನೀವು ಚಾಸಾ.1 ರವರನ್ನು ಉದ್ದೇಶಿಸಿ ನೀನು ಎಷ್ಟು ದಪ್ಪಗಿದ್ದೀಯ ಬೋಳಿಮಗಳೆ ಸೂಳೆಮಗಳೆ ಎಂದು ಅವಾಚ್ಯ ಶಬ್ದಗಳಿಂದ ಬೈದು ಮಹಿಳೆಯ ಘನತೆಗೆ ಕುಂದುಂಟು ಮಾಡುವ ಉದ್ದೇಶದಿಂದ ಅವರನ್ನು ಅವಮಾನನಿಸಿರುತ್ತೀರಿ. ಆದ್ದರಿಂದ ಆರೋಪಿತರಾದ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ.79 ಸಹವಾಚಕ ಕಲಂ.190 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಮೂರನೆಯದಾಗಿ , ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಸಮಾನ ಉದ್ದೇಶವನ್ನು ಹೊಂದಿ, 2 ರಿಂದ 8 ನೇ ಆರೋಪಿತರಾದ ನೀವುಗಳು ಅಕ್ರಮ ಗುಂಪು ಕಟ್ಟಿಕೊಂಡಿರುತ್ತೀರಿ. ಆದ್ದರಿಂದ ಆರೋಪಿತರಾದ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ.189(2) ಸಹವಾಚಕ ಕಲಂ.190 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ನಾಲ್ಕನೆಯದಾಗಿ , ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಸಮಾನ ಉದ್ದೇಶವನ್ನು ಹೊಂದಿ, 2 ರಿಂದ 8 ನೇ

ಆರೋಪಿತರಾದ ನೀವುಗಳು ಅಕ್ರಮ ಗುಂಪು ಕಟ್ಟಿಕೊಂಡು ದೊಂಬಿ ಮಾಡಿರುತ್ತೀರಿ. ಆದ್ದರಿಂದ ಆರೋಪಿತರಾದ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ.191(2) ಸಹವಾಚಕ ಕಲಂ.190 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಐದನೆಯದಾಗಿ , ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಸಮಾನ ಉದ್ದೇಶವನ್ನು ಹೊಂದಿ, ಆರೋಪಿತರಾದ ನೀವು ಗುಂಪು ಕಟ್ಟಿಕೊಂಡು ಬಂದು 1 ನೇ ಆರೋಪಿಗೆ ಚಾಸಾ. 1 ರವರನ್ನು ಹಿಡಿದಿಕೊ ಎಂದು ಹೇಳಿ, 2 ಮತ್ತು 3 ನೇ ಆರೋಪಿತರು ಚಾಸಾ.1 ರವರ ನೈಟಿಯನ್ನು ಹಿಡಿದು ಎಳೆದಾಡಿ ಅವರನ್ನು ವಿವಸ್ತ್ರಗೊಳಿಸಲು ಪ್ರಯತ್ನಿಸಿರುತ್ತಾರೆ ಮತ್ತು 2 ಮತ್ತು 8 ನೇ ಆರೋಪಿತರಾದ ನೀವು ಚಾಸಾ. 1 ರವರ ನೈಟಿಯನ್ನು ಹರಿದು ಹಾಕಿ ಆಕೆಯ ಮೇಲೆ ಅಪರಾಧಿಕ ಬಲಪ್ರಯೋಗ ಮಾಡಿರುತ್ತೀರಿ. ಆದ್ದರಿಂದ ಆರೋಪಿತರಾದ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ.76 ಸಹವಾಚಕ ಕಲಂ.190 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಆರನೆಯದಾಗಿ , ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಸಮಾನ ಉದ್ದೇಶವನ್ನು ಹೊಂದಿ, 4 ಮತ್ತು 5 ನೇ ಆರೋಪಿತರಾದ ನೀವು ಚಾಸಾ.1 ರವರಿಗೆ ಕೈಗಳಿಂದ ಮುಖಕ್ಕೆ ಎದೆಗೆ ಬೆನ್ನಿಗೆ ಹೊಡೆದಿರುತ್ತೀರಿ, 6 ಮತ್ತು 7 ನೇ ಆರೋಪಿತರಾದ ನೀವು ಚಾಸಾ.1 ರವರನ್ನು ಕೆಳಕ್ಕೆ ಕೆಡವಿ ಕಾಲುಗಳಿಂದ ತುಳಿದಿರುತ್ತೀರಿ, 2 ಮತ್ತು 8 ನೇ ಆರೋಪಿತರಾದ ನೀವು ಚಾಸಾ.1 ರವರ ಮುಖವನ್ನು ಪರಚಿ, ಜಗಳ ಬಿಡಿಸಲು ಬಂದ

ಚಾಸಾ.2 ಮತ್ತು 3 ರವರಿಗೆ 3 ಮತ್ತು 4 ನೇ ಆರೋಪಿತರಾದ ನೀವು ಕೈಗಳಿಂದ ಬೆನ್ನಿಗೆ ಹೊಡೆದಿರುತ್ತೀರಿ ಮತ್ತು ಚಾಸಾ.2 ರವರಿಗೆ 2,5 ಮತ್ತು 6 ನೇ ಆರೋಪಿತರಾದ ನೀವು ಕಾಲುಗಳಿಂದ ಒದ್ದು ಸಾಮಾನ್ಯ ಸ್ವರೂಪದ ನೋವುಂಟು ಮಾಡಿರುತ್ತೀರಿ. ಆದ್ದರಿಂದ ಆರೋಪಿತರಾದ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ.115(2) ಸಹವಾಚಕ ಕಲಂ.190 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಏಳನೆಯದಾಗಿ , ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಸಮಾನ ಉದ್ದೇಶವನ್ನು ಹೊಂದಿ, 6 ಮತ್ತು 7 ನೇ ಆರೋಪಿತರಾದ ನೀವು ಚಾಸಾ.1 ಬಡ್ಡಿ ಸೂಳೆ ಎಂದು ಅವಾಚ್ಯ ಶಬ್ದಗಳಿಂದ ಬೈದು ಉದ್ರೇಕವನ್ನುಂಟು ಮಾಡಿದರೆ ಅಂತಹ ಉದ್ರೇಕದಿಂದ ಶಾಂತಿ ಭಂಗ ಮಾಡಲಿ ಅಥವಾ ಇತರೆ ಯಾವುದೇ ಅಪರಾಧ ಮಾಡಲಿ ಎನ್ನುವ ಉದ್ದೇಶದಿಂದ ಅವರನ್ನು ಅವಮಾನಿಸಿರುತ್ತೀರಿ. ಆದ್ದರಿಂದ ಆರೋಪಿತರಾದ ಭಾರತೀಯ ನ್ಯಾಯ ಸಂಹಿತೆಯ ಕಲಂ.352 ಸಹವಾಚಕ ಕಲಂ.190 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಕೊನೆಯದಾಗಿ , ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಸಮಾನ ಉದ್ದೇಶವನ್ನು ಹೊಂದಿ, 6 ಮತ್ತು 7 ನೇ ಆರೋಪಿತರಾದ ನೀವು ಈ ಸೂಳೆಯನ್ನು ಸಾಯಿಸಿ ಎಂದು ಕೊಲೆ ಬೆದರಿಕೆ ಹಾಕಿ ಅಪರಾಧಿಕ ಭಯೋತ್ಪಾದನೆಯನ್ನು ಎಸಗಿರುತ್ತೀರಿ. ಆದ್ದರಿಂದ ಆರೋಪಿತರಾದ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ.351(2)

ಸಹವಾಚಕ ಕಲಂ.190 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

(ಮೇಲ್ಕಂಡ ಆರೋಪವನ್ನು ಆರೋಪಿತರಿಗೆ ಓದಿ ಹೇಳಿ ಕೇಳಲಾಯಿತು. ಆರೋಪಿ ಕೊಟ್ಟ ಉತ್ತರವನ್ನು ಅವರು ಉತ್ತರಿಸಿದಂತೆಯೇ ಬರೆದುಕೊಂಡಿದ್ದು ಸಂಪೂರ್ಣ ಹಾಗೂ ಸರಿಯಾದ ಮಾಹಿತಿಯನ್ನು ಒಳಗೊಂಡಿದೆ ಎಂದು ದಿನಾಂಕ 13.01.2026 ರಂದು ತೆರೆದ ನ್ಯಾಯಾಲಯದಲ್ಲಿ ದೃಢೀಕರಿಸಿರುತ್ತೇನೆ.)

1 ನೇ ಹೆ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.
ನಂಜನಗೂಡು

1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ನಂಜನಗೂಡು

**ಸಿ.ಸಿ.ಸಂಖ್ಯೆ1558/2025**

ಪಿರ್ಯಾದಿ : ಕವಲಂದೆ ಪೊಲೀಸರು

ವಿರುದ್ಧ

ಆರೋಪಿ :

1 ಮಹದೇವಪ್ರಸಾದ್ ಬಿನ್ ಮಾದಪ್ಪ 23 ವರ್ಷ
2 ದಿಲೀಪಕುಮಾರ್ ಆರ್ ಬಿನ್ ರುದ್ರಪ್ಪ 24 ವರ್ಷ
3 ರುದ್ರಪ್ಪ ಬಿನ್ ಲೇಟ್ ರಾಮಪ್ಪ 50 ವರ್ಷ
4 ಮಾದಪ್ಪ ಬಿನ್ ಲೇಟ್ ರಾಮಪ್ಪ 58 ವರ್ಷ
5 ಶಿವಣ್ಣ ಬಿನ್ ಲೇಟ್ ನಾಗಪ್ಪ 36 ವರ್ಷ
6 ಮಾದಪ್ಪ ಬಿನ್ ಲೇಟ್ ಪುಟ್ಟಬಸಪ್ಪ 53 ವರ್ಷ
7 ಚಂದ್ರಪ್ಪ ಬಿನ್ ಲೇಟ್ ನಂಜುಂಡಪ್ಪ 55 ವರ್ಷ
8 ಮಾದಪ್ಪ ಬಿನ್ ಲೇಟ್ ಶಿವಮಲ್ಲಪ್ಪ 53 ವರ್ಷ

ಎಲ್ಲರ ವಾಸಃ ಕಾರೆಪುರ ಗ್ರಾಮ, ನಂಜನಗೂಡು ತಾಲ್ಲೂಕು

: ಆಪಾದನೆ :

ಪ್ರಶ್ನೆಃ1– ಈ ಮೇಲೆ ಹೇಳಿದಂತೆ ನಿಮಗೆ ಓದಿ ಹೇಳಿ ವಿವರಿಸಿದ ಆಪಾದನೆಯನ್ನು ಅರ್ಥಮಾಡಿಕೊಂಡಿರುವಿರಾ?

1 ನೇ ಆರೋಪಿ ಉತ್ತರಃ

2 ನೇ ಆರೋಪಿ ಉತ್ತರಃ

3 ನೇ ಆರೋಪಿ ಉತ್ತರಃ

4 ನೇ ಆರೋಪಿ ಉತ್ತರಃ

5 ನೇ ಆರೋಪಿ ಉತ್ತರಃ

6 ನೇ ಆರೋಪಿ ಉತ್ತರಃ

7 ನೇ ಆರೋಪಿ ಉತ್ತರಃ

8 ನೇ ಆರೋಪಿ ಉತ್ತರಃ

ಪ್ರಶ್ನೆ:2– ಸದರಿ ಆಪಾದನೆಗಳನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೋ?

1 ನೇ ಆರೋಪಿ ಉತ್ತರಃ

2 ನೇ ಆರೋಪಿ ಉತ್ತರಃ

3 ನೇ ಆರೋಪಿ ಉತ್ತರಃ

4 ನೇ ಆರೋಪಿ ಉತ್ತರಃ

5 ನೇ ಆರೋಪಿ ಉತ್ತರಃ

6 ನೇ ಆರೋಪಿ ಉತ್ತರಃ

7 ನೇ ಆರೋಪಿ ಉತ್ತರಃ

8 ನೇ ಆರೋಪಿ ಉತ್ತರಃ

ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ನನ್ನ ಸಮಕ್ಷಮ ಓದಿ ಹೇಳಿ ಆರೋಪಿತನ ಹೇಳಿಕೆಯನ್ನು ಪಡೆದುಕೊಂಡು ಸತ್ಯವಾಗಿದೆ ಎಂದು ದೃಢೀಕರಿಸಲಾಗಿದೆ.

1 ನೇ ಹೆ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.
**ನಂಜನಗೂಡು**